೧

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಗೋವಿಂದರಾಜು ಇವರು ನಿಯಮ-72ರ ಅಡಿಯಲ್ಲಿ ನೀಡಿರುವ ಗಮನ ಸೆಳೆಯುವ ಸೂಚನೆಗೆ ಉತ್ತರಿಸುವ ಬಗ್ಗೆ.**

**ವಿಷಯ:** ಕಬ್ಬು ಬೆಳೆಗಾರರು ಹಗಲು-ರಾತ್ರಿ ಎನ್ನದೇ ಕಷ್ಟಪಟ್ಟು ಸಾಲ ಮಾಡಿ ಕಬ್ಬು ಬೆಳೆದು ಕಾರ್ಖಾನೆಗೆ ಪೂರೈಸಿ ಸಮಯಕ್ಕೆ ಸರಿಯಾಗಿ ಹಣ ಕೈಗೆ ಬರದೆ ರೈತರು ಹೈರಾಣಾಗುತ್ತಿರುವುದು ಹಾಗೂ ಮೂರ್ನಾಲ್ಕು ವರ್ಷಗಳು ಕಳೆದರೂ ಕೆಲವು ಕಾರ್ಖಾನೆಗಳು ಹಣ ಬಾಕಿ ಉಳಿಸಿಕೊಂಡಿದ್ದು ಅತ್ಯಂತ ನೋವಿನ ಸಂಗತಿ. ಕಬ್ಬಿಗೆ ಸರಿಯಾಗಿ ಬೆಲೆ ನಿಗದಿ, ಕಬ್ಬಿನ ಹಣ ಪಾವತಿ, ಸರಿಯಾದ ಸಮಯಕ್ಕೆ ಕಬ್ಬು ಕಟಾವು ಕಾರ್ಖಾನೆಗಳಿಗೆ ಸಾಗಿಸುವುದು ಹೀಗೆ ಹತ್ತು ಹಲವು ತೊಂದರೆಗಳನ್ನು ರೈತರು ಅನುಭವಿಸುತ್ತಿದ್ದಾರೆ, ಕಬ್ಬು ರಾಜ್ಯದ ಪ್ರಮುಖ ವಾಣಿಜ್ಯ ಬೆಳೆಯೂ ಹೌದು. ಸಕ್ಕರೆ ಉದ್ದಿಮೆ ಕೃಷಿ ಆಧಾರಿತ ಗ್ರಾಮೀಣ ಪ್ರದೇಶದ ಎರಡನೆಯ ಮಹತ್ವದ ಕೈಗಾರಿಕೆಯೂ ಹೌದು.. ಉದ್ಯೋಗ ಸೃಷ್ಟಿಯಲ್ಲಿಯೂ ಈ ಉದ್ದಿಮೆ ಪ್ರಮುಖ ಪಾತ್ರ ವಹಿಸುತ್ತಿದೆ. ಆದ್ದರಿಂದ ಈ ಉದ್ದಿಮೆ ಹಾಗೂ ಕಬ್ಬು ಬೆಳೆಗಾರರ ಹಿತ ಕಾಪಾಡಲು ಸರಕಾರ ಬೇಗ ಕ್ರಮ ಕೈಗೊಳ್ಳುವ ಅವಶ್ಯಕತೆ ಇರುವುದರಿಂದ ಈ ವಿಷಯವನ್ನು ಮಾನ್ಯ ಸಕ್ಕರೆ ಇಲಾಖಾ ಸಚಿವರ ಗಮನ ಸೆಳೆಯಲು ಬಯಸುತ್ತೇನೆ.

**ಸರ್ಕಾರದ ಉತ್ತರ:-**

ಕರ್ನಾಟಕ ರಾಜ್ಯವು ದೇಶದಲ್ಲಿ ಮೂರನೇ ಅತಿ ದೊಡ್ಡ ಸಕ್ಕರೆ ಉತ್ಪಾದನೆಯ ರಾಜ್ಯವಾಗಿದೆ. ಪ್ರಸ್ತುತ ರಾಜ್ಯದಲ್ಲಿ ಒಟ್ಟು 92 ನೋಂದಾಯಿತ ಸಕ್ಕರೆ ಕಾರ್ಖಾನೆಗಳಿದ್ದು, ಇವುಗಳ ಪೈಕಿ 2022-23ನೇ ಹಂಗಾಮಿನಲ್ಲಿ 73 ಸಕ್ಕರೆ ಕಾರ್ಖಾನೆಗಳು ಕಾರ್ಯನಿರತವಾಗಿವೆ. 2018-19ನೇ ಹಂಗಾಮಿನಿಂದ 2021-22ನೆ ಹಂಗಾಮಿನ ಅವಧಿಯಲ್ಲಿ ರಾಜ್ಯದ ಸಕ್ಕರೆ ಕಾರ್ಖಾನೆಗಳಿಗೆ ಕಬ್ಬು ಸರಬರಾಜು ಮಾಡಿದ ರೈತರಿಗೆ ರೂ.65,266.24 ಕೋಟಿಗಳನ್ನು ಪಾವತಿಸಬೇಕಾಗಿದ್ದು, ಇದರಲ್ಲಿ ರೂ.66,827.11 ಕೋಟಿಗಳನ್ನು ಸಕ್ಕರೆ ಕಾರ್ಖಾನೆಗಳಿಂದ ಪಾವತಿಸಲಾಗಿರುತ್ತದೆ. ಈ ಅವಧಿಯಲ್ಲಿ ಕೆಲವು ಸಕ್ಕರೆ ಕಾರ್ಖಾನೆಗಳಿಂದ ಕೇಂದ್ರ ಸರ್ಕಾರವು ನಿಗದಿಪಡಿಸಿದ ಎಫ್.ಆರ್.ಪಿ. ದರಕ್ಕಿಂತ ಹೆಚ್ಚಿಗೆ ಹಣವನ್ನು ರೈತರಿಗೆ ಪಾವತಿಸಲಾಗಿರುತ್ತದೆ.

ಆದಾಗ್ಯೂ, 2018-19ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ರೂ.3.94 ಕೋಟಿಗಳನ್ನು ಪಾವತಿಸುವುದು ಬಾಕಿ ಇದ್ದು ಕಾರ್ಖಾನೆವಾರು ವಿವರಗಳು ಈ ಕೆಳಕಂಡಂತಿವೆ.

(ರೂ.ಕೋಟಿಗಳಲ್ಲಿ)

| ಕ್ರ.ಸಂ. | ಕಾರ್ಖಾನೆಯ ಹೆಸರು | ಮೊತ್ತ. |
|---|---|---|
| 1. | ಬೀದರ ಸಹಕಾರಿ ಸಕ್ಕರೆ ಕಾರ್ಖಾನೆ , ಹಳ್ಳಿಖೇಡ, ಹುಮನಾಬಾದ ತಾಲ್ಲೂಕು, ಬೀದರ್ ಜಿಲ್ಲೆ | 0.89 |
| 2. | ಭವಾನಿ ಶುಗರ್ ಲಿ., ಬರೂರ, ಬೀದರ್ ಜಿಲ್ಲೆ | 1.80 |
| 3. | ಧ್ಯಾನಯೋಗಿ ಶ್ರೀ ಶಿವಕುಮಾರ ಸ್ವಾಮೀಜಿ ಶುಗರ್ ಲಿ., ಇಂಡಿ, ವಿಜಯಪುರ ಜಿಲ್ಲೆ | 1.25 |
| ಒಟ್ಟು | | 3.94 |

ಮೇಲ್ಕಂಡ ಮೂರು ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಕಾರ್ಯವನ್ನು ಸ್ಥಗಿತಗೊಳಿಸಿರುವುದರಿಂದ ಕಾರ್ಖಾನೆಗಳಿಗೆ ಯಾವುದೇ ಆದಾಯದ ಮೂಲಗಳು ಇರುವುದಿಲ್ಲ. ಆದ್ದರಿಂದ, ಮೇಲ್ಕಂಡ ಮೂರು ಕಾರ್ಖಾನೆಗಳ ಚರ ಮತ್ತು ಸ್ಥಿರಾಸ್ತಿಗಳನ್ನು ಹರಾಜು ಪ್ರಕ್ರಿಯೆಗೆ ಒಳಪಡಿಸಿ ಕಬ್ಬು ಬಿಲ್ಲು ವಸೂಲಾತಿಗೆ ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದು, ವಸೂಲಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

2022-23ನೇ ಹಂಗಾಮಿನಲ್ಲಿ 73 ಸಕ್ಕರೆ ಕಾರ್ಖಾನೆಗಳು ಕಬ್ಬು ಅರೆಯುವ ಕಾರ್ಯವನ್ನು ಪ್ರಾರಂಭಿಸಿರುತ್ತವೆ. ಈ ಕಾರ್ಖಾನೆಗಳು ದಿನಾಂಕ:15.11.2022ರ ಅಂತ್ಯಕ್ಕೆ 138.43 ಲಕ್ಷ ಮೆ.ಟನ್ ಕಬ್ಬು ನುರಿಸಿ, 15.18 ಲಕ್ಷ ಮೆ. ಟನ್ ಸಕ್ಕರೆ ಉತ್ಪಾದನೆ ಮಾಡಿ, ಶೇ.11ರಷ್ಟು ಸಕ್ಕರೆ ಇಳುವರಿ ಪಡೆದಿರುತ್ತವೆ. ಪ್ರಸಕ್ತ ಹಂಗಾಮಿಗೆ ಕಾರ್ಖಾನೆಗಳು ಪಾವತಿಸಬೇಕಾದ ಕಬ್ಬಿನ ಬಿಲ್ಲು ಮೊತ್ತ ರೂ.4444.48 ಕೋಟಿಗಳಾಗಿದ್ದು, ಈ ಪೈಕಿ ರೂ.2530.26 ಕೋಟಿಗಳಷ್ಟನ್ನು ಪಾವತಿಸಲಾಗಿದ್ದು, ಬಾಕಿ ಮೊತ್ತ ರೂ.1914.22 ಕೋಟಿಗಳಷ್ಟು ಇರುತ್ತದೆ. ಪ್ರಸ್ತುತ ಹಂಗಾಮು ಚಾಲನೆಯಲ್ಲಿರುವುದರಿಂದ ಕಾರ್ಖಾನೆಗಳು ರೈತರ ಕಬ್ಬು ಬಿಲ್ಲು ಬಾಕಿಯನ್ನು ಪಾವತಿಸಲು ಅವಕಾಶಗಳಿರುತ್ತವೆ.

ಕೃಷಿ ವೆಚ್ಚ ಮತ್ತು ಬೆಲೆ ಆಯೋಗವು (Commission for Agriculture Cost and Price) ಕಬ್ಬು ಬೆಳೆಯುವ ರಾಜ್ಯಗಳಿಗೆ ಭೇಟಿ ನೀಡಿ ಸಂಬಂಧಿಸಿದ ರಾಜ್ಯ ಸರ್ಕಾರ, ರೈತ ಪ್ರತಿನಿಧಿಗಳು ಮತ್ತು ಸಕ್ಕರೆ ಕಾರ್ಖಾನೆಗಳ ಪ್ರತಿನಿಧಿಗಳೊಡನೆ ಸಭೆ ನಡೆಸಿ, ಅಧ್ಯಯನ ನಡೆಸಿ, ಆ ವರ್ಷದ ವೈಜ್ಞಾನಿಕ ಬೆಲೆಯನ್ನು ನಿಗದಿಗೊಳಿಸಿ ಘೋಷಿಸುವ ಸಂಬಂಧ ಕೇಂದ್ರ ಸರ್ಕಾರಕ್ಕೆ ವರದಿ ಸಲ್ಲಿಸುತ್ತದೆ. CACPಯ ವರದಿಯನ್ನು ಆಧರಿಸಿ ಸದರಿ ವರ್ಷದಲ್ಲಿ ಪ್ರತಿ ಟನ್ ಕಬ್ಬಿಗೆ ನ್ಯಾಯ ಮತ್ತು ಲಾಭದಾಯಕ ಬೆಲೆ [Fair and Remunerative Price (FRP)] ಎಂದು ಕೇಂದ್ರ ಸರ್ಕಾರವು ಘೋಷಿಸುತ್ತದೆ. ಕಳೆದ 5 ವರ್ಷಗಳಲ್ಲಿ ಘೋಷಣೆ ಆಗಿರುವ ಎಫ್.ಆರ್.ಪಿ. ದರ ಈ ಕೆಳಕಂಡಂತಿದೆ.

| ವರ್ಷ | ಘೋಷಿಸಿರುವ ಎಫ್.ಆರ್.ಪಿ ಪ್ರತಿ ಕ್ವಿಂಟಾಲ್‌ಗೆ (ರೂ.ಗಳಲ್ಲಿ) |
|---|---|
| 2018-19 | 275 |
| 2019-20 | 280 |
| 2020-21 | 285 |
| 2021-22 | 290 |
| 2022-23 | 305 |

ಕೇಂದ್ರ ಸರ್ಕಾರವು ಘೋಷಿಸುವ ಎಫ್.ಆರ್.ಪಿ.ದರವನ್ನು ಹಾಗೂ ರಾಜ್ಯದ ಪ್ರತಿ ಸಕ್ಕರೆ ಕಾರ್ಖಾನೆಗಳ ಸಕ್ಕರೆ ಇಳುವರಿಯನ್ನು ಆಧರಿಸಿ ಲೆಕ್ಕಾಚಾರ ಮಾಡಿ ಕಾರ್ಖಾನೆಗಳು ಕಬ್ಬು ಅರೆಯುವ ಕೆಲಸವನ್ನು ಪ್ರಾರಂಭಿಸುವ ಮೊದಲೇ ಕಬ್ಬು ನಿಯಂತ್ರಣ ಮಂಡಳಿಯ ಅನುಮೋದನೆ ಪಡೆದು ಕರ್ನಾಟಕ ರಾಜ್ಯದಲ್ಲಿನ ಸಕ್ಕರೆ ಕಾರ್ಖಾನೆಗಳು ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಕಬ್ಬಿನ ಬೆಲೆಯನ್ನು ಘೋಷಿಸಲಾಗುತ್ತದೆ.

ಕೇಂದ್ರ ಸರ್ಕಾರದ ಆಹಾರ ಮತ್ತು ಸಾರ್ವಜನಿಕ ವಿತರಣಾ ಇಲಾಖೆಯ ಪತ್ರ ಸಂಖ್ಯೆ 3(1)/2021-ಎಸ್‌ಪಿ-I ದಿನಾಂಕ:17.08.2022ರಲ್ಲಿ 2022-23ನೇ ಸಕ್ಕರೆ ಹಂಗಾಮಿಗೆ ಈ ಕೆಳಗಿನಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು [Fair and Remunerative Price] ನಿಗದಿಪಡಿಸಲಾಗಿರುತ್ತದೆ.

1. ಶೇಕಡ 10.25 ರಷ್ಟು ಸಕ್ಕರೆ ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ಕಬ್ಬಿಗೆ ರೂ.305/-
2. ಶೇಕಡ 10.25 ಕ್ಕೆ ಮೇಲ್ಪಟ್ಟು ಇಳುವರಿಗೆ ನಂತರದ ಶೇಕಡ 1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.3.05/- ರಂತೆ ಹೆಚ್ಚುವರಿ ಬೆಲೆ.
3. ಶೇಕಡ 10.25 ಕ್ಕಿಂತ ಕಡಿಮೆ ಹಾಗೂ ಶೇಕಡ 9.5ಕ್ಕೆ ಮೇಲ್ಪಟ್ಟ ಇಳುವರಿ ಹೊಂದಿರುವ ಸಕ್ಕರೆ ಕಾರ್ಖಾನೆಗಳಿಗೆ ಶೇಕಡ 0.1 ರಷ್ಟು ಇಳುವರಿಗೆ ಪ್ರತಿ ಕ್ವಿಂಟಾಲ್‌ಗೆ ರೂ.3.05 ರ ಸರಾಸರಿಯಂತೆ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ಕಡಿಮೆ ಮಾಡುವುದು.
4. ಶೇಕಡ 9.5 ಅಥವಾ 9.5 ಕ್ಕಿಂತ ಕಡಿಮೆ ಇಳುವರಿ ಹೊಂದಿರುವ ಕಾರ್ಖಾನೆಗಳಿಗೆ ಪ್ರತಿ ಕ್ವಿಂಟಾಲ್‌ಗೆ ರೂ.282.125ಗಳ ನ್ಯಾಯ ಮತ್ತು ಲಾಭದಾಯಕ ಬೆಲೆ.

ಮೇಲ್ಕಂಡಂತೆ ನಿಗದಿಪಡಿಸಿರುವ ಎಫ್.ಆರ್.ಪಿ. ದರವನ್ನು ಮತ್ತು ರಾಜ್ಯದ ಸಕ್ಕರೆ ಕಾರ್ಖಾನೆಗಳು 2021-22ನೇ ಸಾಲಿನಲ್ಲಿ ನುರಿಸಿದ ಕಬ್ಬಿನಿಂದ ಉತ್ಪಾದಿಸಲಾದ ಸಕ್ಕರೆ ಇಳುವರಿಯನ್ನು ಆಧರಿಸಿ, 2022-23ನೇ ಹಂಗಾಮಿನಲ್ಲಿ ಕಬ್ಬು ಸರಬರಾಜು ಮಾಡಿದ ರೈತರಿಗೆ ಪಾವತಿಸಬೇಕಾದ ಮೊದಲ ಕಂತಿನ ನ್ಯಾಯ ಮತ್ತು ಲಾಭದಾಯಕ ಬೆಲೆಯನ್ನು ([Fair and Remunerative Price]) ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ-2014ರ ಕಲಂ 9(1) ರನ್ವಯ ನಿಗದಿಗೊಳಿಸಿ ದಿನಾಂಕ: 18.10.2022 ರಂದು ಆದೇಶವನ್ನು ಹೊರಡಿಸಲಾಗಿದೆ.

ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿಪಡಿಸಲು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) ಅಧಿನಿಯಮ -2013 ಮತ್ತು ಕರ್ನಾಟಕ ಕಬ್ಬು (ಖರೀದಿ ಮತ್ತು ಸರಬರಾಜು ನಿಯಂತ್ರಣ) (ತಿದ್ದುಪಡಿ) ಅಧಿನಿಯಮ 2014ರಲ್ಲಿ ಮಾನದಂಡಗಳನ್ನು ಅಧಿನಿಯಮಿಸಲಾಗಿದೆ. ಈ ಮಾನದಂಡಗಳನ್ವಯ ಮೊದಲನೇ ಹಂತದಲ್ಲಿ ಕೇಂದ್ರ ಸರ್ಕಾರವು ನಿಗದಿಗೊಳಿಸುವ ಎಫ್.ಆರ್.ಪಿ ದರವನ್ನು ಏಕ ಕಂತಿನಲ್ಲಿ ಪಾವತಿಸುವುದು ಹಾಗೂ ಆದಾಯ ಹಂಚಿಕೆ ಸೂತ್ರದ ಅನುಸಾರ ಪ್ರಾಪ್ತವಾದ ಆದಾಯವನ್ನು ಲೆಕ್ಕಾಚಾರ ಮಾಡಿ ಎಫ್.ಆರ್.ಪಿ.ಗೂ ಮೇಲ್ಪಟ್ಟು ಆದಾಯ ಪ್ರಾಪ್ತವಾಗಿದ್ದಲ್ಲಿ, ಅಂತಹ ದರವನ್ನು ಎರಡನೆ ಹಂತದಲ್ಲಿ ಕಬ್ಬು ಸರಬರಾಜುದಾರರಿಗೆ ಪಾವತಿಸಲಾಗುತ್ತದೆ.

ರೈತರು ಮತ್ತು ಸಕ್ಕರೆ ಕಾರ್ಖಾನೆಗಳ ನಡುವೆ ಆದಾಯ ಹಂಚಿಕೆ ಮಾಡುವಾಗ ಇದುವರೆವಿಗೂ ಸಕ್ಕರೆ, ಬಗಾಸ್, ಮೊಲಾಸಿಸ್ ಮತ್ತು ಪ್ರೆಸ್‌ಮಡ್‌ಗಳಿಂದ ಬರುವ ಆದಾಯವನ್ನು ಮಾತ್ರ ಪರಿಗಣಿಸಲಾಗುತ್ತಿತ್ತು. ಸಕ್ಕರೆ ಉದ್ಯಮದ ಇತಿಹಾಸದಲ್ಲಿಯೇ ಎಫ್.ಆರ್.ಪಿ. ದರದ ಮೇಲೆ ಹೆಚ್ಚುವರಿಯಾಗಿ ಕಬ್ಬಿನ ಬಿಲ್ಲನ್ನು ಪಾವತಿಸಲು ಅನುಕೂಲವಾಗುವಂತೆ ಪ್ರಪ್ರಥಮ ಬಾರಿಗೆ 2022-23ನೇ ಹಂಗಾಮಿನಲ್ಲಿ ಉಪ ಉತ್ಪನ್ನವಾದ ಎಥನಾಲ್ ಅನ್ನು ಆದಾಯ ಹಂಚಿಕೆ ಪರಿಗಣನೆಗೆ ತೆಗೆದುಕೊಳ್ಳಲಾಗಿದೆ. ಅದರಂತೆ ಪ್ರಥಮ ಕಂತಿನಲ್ಲಿ ಎಫ್.ಆರ್.ಪಿ. ಜೊತೆಗೆ ಪ್ರತಿ ಮೆ. ಟನ್ ಒಂದಕ್ಕೆ ರೂ.50/- ಗಳನ್ನು ಹೆಚ್ಚುವರಿಯಾಗಿ ಪಾವತಿಸಲು ದಿನಾಂಕ:05.12.2022ರ ಆದೇಶದಲ್ಲಿ ಸಂಬಂಧಿಸಿದ ಎಲ್ಲಾ ಸಕ್ಕರೆ ಕಾರ್ಖಾನೆಗಳಿಗೆ ಸೂಚನೆ ನೀಡಲಾಗಿದೆ. ಇದರಿಂದಾಗಿ ರಾಜ್ಯದ ರೈತರಿಗೆ ರೂ.204.47 ಕೋಟಿಗಳಷ್ಟು ಹೆಚ್ಚುವರಿ ಕಬ್ಬಿನ ಬೆಲೆ ಸಿಗಲಿದೆ.

2022-23ನೇ ಹಂಗಾಮು ಮುಕ್ತಾಯಗೊಂಡ ನಂತರ ಸಕ್ಕರೆ, ಎಥನಾಲ್ ಮತ್ತು ಇತರೆ ಉಪ ಉತ್ಪನ್ನಗಳ ಮಾರಾಟದಿಂದ ಬರುವ ಆದಾಯವನ್ನು ಲೆಕ್ಕಾಚಾರ ಮಾಡಿ ಕಾರ್ಖಾನೆ ಮತ್ತು ರೈತರಿಗೆ ಹಂಚಿಕೆ ಮಾಡಲಾಗುವುದು. ಇದರಿಂದ ರೈತರಿಗೆ ಹೆಚ್ಚುವರಿ ಬೆಲೆ ಸಿಗುವ ಸಾಧ್ಯತೆ ಇರುತ್ತದೆ.

ರಾಜ್ಯದ ಕಬ್ಬು ಬೆಳೆಗಾರರು ಬೆಳೆದ ಕಬ್ಬಿನ ಕಟಾವು ಮತ್ತು ಸಾಗಾಣಿಕೆಯನ್ನು ಸುಗಮವಾಗಿಸುವ ದೃಷ್ಟಿಯಿಂದ ಆಯಾ ಸಕ್ಕರೆ ಕಾರ್ಖಾನೆಯ ವ್ಯಾಪ್ತಿಯಲ್ಲಿ ಬರುವ ರೈತರು ಮತ್ತು ಕಾರ್ಖಾನೆಯ ನಡುವೆ ದ್ವಿಪಕ್ಷೀಯ ಒಪ್ಪಂದವನ್ನು ಮಾಡಿಕೊಳ್ಳುವುದು ಅತಿ ಅವಶ್ಯಕವಿರುತ್ತದೆ. ಆದ್ದರಿಂದ ಕಾರ್ಖಾನೆಯ ಮತ್ತು ಕಬ್ಬು ಬೆಳೆಗಾರರ ನಡುವೆ ದ್ವಿಪಕ್ಷೀಯ ಒಪ್ಪಂದ ಮಾಡಿಕೊಳ್ಳಲು ಎಲ್ಲಾ ಕಾರ್ಖಾನೆಗಳಿಗೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಮೂಲಕ ಸೂಚನೆಗಳನ್ನು ನೀಡಲಾಗಿದೆ.

ಅಲ್ಲದೆ, ಎಲ್ಲಾ ಸಕ್ಕರೆ ಕಾರ್ಖಾನೆಗಳು ನೋಂದಾಯಿತ ಕಬ್ಬು ಬೆಳೆಯ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಪ್ರತಿ ನೋಂದಾಯಿತ ಕಬ್ಬು ಬೆಳೆಗಾರರ ಜೇಷ್ಠತೆ (ಕಬ್ಬು ನಾಟಿ/ ಕೂಳೆ ಮಾಡಿದ ಅವಧಿ) ಆಧಾರದ ಮೇಲೆ ಆಯಾ ಕಾರ್ಖಾನೆಯ ವ್ಯಾಪ್ತಿಯಲ್ಲಿ ಬರುವ ಹಳ್ಳಿಗಳಲ್ಲಿ/ ಹೋಬಳಿಗಳಲ್ಲಿ ಕಬ್ಬು ಕಟಾವು ಮಾಡುವ ಅವಧಿಯನ್ನು ನಿಗದಿಪಡಿಸಿ ಕಬ್ಬು ಕಟಾವಿನ ಆದ್ಯತಾ ಪಟ್ಟಿಯನ್ನು ಕಾರ್ಖಾನೆಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಹಾಗೂ ಈ ಬಗ್ಗೆ ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆ ನೀಡಲು ಕಾರ್ಖಾನೆಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. ಇದರಿಂದಾಗಿ ಕಬ್ಬು ಕಟಾವು ಮತ್ತು ಸಾಗಾಣಿಕೆ ಮಾಡಲು ಅನಾವಶ್ಯಕವಾಗಿ ಕಬ್ಬು ಬೆಳೆಗಾರರಿಗೆ ಆಗುವ ತೊಂದರೆಯನ್ನು ಹೋಗಲಾಡಿಸಲು ಅನುಕೂಲವಾಗುವುದು. ಇದರಿಂದ ಸಕ್ಕರೆ ಕಾರ್ಖಾನೆಗಳಿಗೆ ಉತ್ತಮ ಗುಣಮಟ್ಟದ ಕಬ್ಬನ್ನು ಪಡೆಯಲು ಸಾಧ್ಯವಾಗುತ್ತದೆ.

ಮೇಲ್ಕಂಡಂತೆ ಕಬ್ಬು ಬೆಳೆಗಾರರು ಮತ್ತು ಸಕ್ಕರೆ ಉದ್ದಿಮೆಯ ಹಿತವನ್ನು ಕಾಪಾಡಲು ಸರ್ಕಾರವು ಅವಶ್ಯಕ ಕ್ರಮಗಳನ್ನು ಕೈಗೊಂಡಿರುತ್ತದೆ.

---

ಸಿಐ 204 ಎಸ್‌ಜಿಎಫ್ 2022

(ಶಂಕರ ಬ. ಪಾಟೀಲ ಮುನೇನಕೊಪ್ಪ)
ಕೈಮಗ್ಗ ಮತ್ತು ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವರು

C -20